# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶನಿವಾರ, ದಿನಾಂಕ: 26ನೇ ಸೆಪ್ಟೆಂಬರ್, 2020**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

### 01. ಸಂತಾಪ ಸೂಚನೆ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.

01. ಕರ್ನಾಟಕ ಧನವಿನಿಯೋಗ (ಸಂಖ್ಯೆ.3) ವಿಧೇಯಕ, 2020
02. ಕರ್ನಾಟಕ ಸಾದಿಲ್ವಾರು ನಿಧಿ (ತಿದ್ದುಪಡಿ) ವಿಧೇಯಕ, 2020
03. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2020
04. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2020
05. ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ, 2020
06. ಕರ್ನಾಟಕ ನಗರಪಾಲಿಕೆಗಳ (ಎರಡನೇ ತಿದ್ದುಪಡಿ) ವಿಧೇಯಕ, 2020
07. ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ಮೂರನೇ ತಿದ್ದುಪಡಿ) ವಿಧೇಯಕ, 2020
08. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ, 2020
09. ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2020

### ೦೩. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**01. ಕರ್ನಾಟಕ ಧನವಿನಿಯೋಗ (ಸಂಖ್ಯೆ.3) ವಿಧೇಯಕ, 2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಧನವಿನಿಯೋಗ (ಸಂಖ್ಯೆ.3) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..2..

**02. ಕರ್ನಾಟಕ ಸಾದಿಲ್ವಾರು ನಿಧಿ (ತಿದ್ದುಪಡಿ) ವಿಧೇಯಕ,2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಸಾದಿಲ್ವಾರು ನಿಧಿ

(ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**03. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**04. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**05.ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ, 2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**06. ಕರ್ನಾಟಕ ನಗರಪಾಲಿಕೆಗಳ (ಎರಡನೇ ತಿದ್ದುಪಡಿ) ವಿಧೇಯಕ, 2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ನಗರ ಪಾಲಿಕೆಗಳ

(ಎರಡನೇ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**07. ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ಮೂರನೇ ತಿದ್ದುಪಡಿ) ವಿಧೇಯಕ, 2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ಮೂರನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**08. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ, 2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–
ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**09. ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2020**

ಶ್ರೀ ಸಿ.ಟಿ.ರವಿ (ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಯುವ ಸಬಲೀಕರಣ ಮತ್ತು ಕ್ರೀಡೆಗಳ ಸಚಿವರು) ಅವರು:–
ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀಯುತರುಗಳಾದ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಮರಿತಿಬ್ಬೇಗೌಡ, ಕೆ.ಟಿ. ಶ್ರೀಕಂಠೇಗೌಡ, ಡಾ:ವೈ.ಎ. ನಾರಾಯಣಸ್ವಾಮಿ, ಆಯನೂರು ಮಂಜುನಾಥ, ಅರುಣ ಶಹಾಪುರ,ಎಸ್.ಎಲ್. ಭೋಜೇಗೌಡ, ನಿರಾಣಿ ಹಣಮಂತ ರುದ್ರಪ್ಪ ಹಾಗೂ ಡಾ:ಚಂದ್ರಶೇಖರ ಬ ಪಾಟೀಲ್** ಅವರುಗಳು ಜೆ.ಓ.ಸಿ (ಶಿಕ್ಷಕರ) ವಿಧೇಯಕ ತಿದ್ದುಪಡಿಯಾದ ನಂತರ ವಂಚಿತರಾದ 530 ಬೋಧಕ ಹಾಗೂ ಬೋಧಕೇತರರಿಗೆ ನ್ಯಾಯ ಒದಗಿಸುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಒತ್ತುವರಿಯಾಗಿರುವ ಕೆರೆಗಳನ್ನು ತೆರವುಗೊಳಿಸಿ ಪುನಶ್ಚೇತನಗೊಳಿಸುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

ಇ) **ಶ್ರೀ ಪಿ.ಆರ್ ರಮೇಶ್** ಅವರು ರಾಜ್ಯಾದ್ಯಾಂತ ಕೋವಿಡ್–19 ತೀವ್ರವಾಗಿ ಹರಡಿರುವ ಹಿನ್ನಲೆಯಲ್ಲಿ ರಾಜ್ಯದಲ್ಲಿನ ಜನಸಾಮಾನ್ಯರಿಗೆ ಚಿಕಿತ್ಸೆ ಕೊಡಿಸಲು ಆರೋಗ್ಯ ಸಂಸ್ಥೆಗಳು ಮಾಡಿಕೊಂಡಿರುವ ಸಿದ್ದತೆ ಹಾಗೂ ಸಾರ್ವಜನಿಕರ ಮನೋಸ್ಥೈರ್ಯ ಹೆಚ್ಚಿಸುವ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಈ) **ಶ್ರೀ ಅ.ದೇವೇಗೌಡ** ಅವರು ಬೆಂಗಳೂರು ಮಹಾನಗರ ಪಾಲಿಕೆಯು ಪ್ರಾರಂಭಿಸಿರುವ ನಾಲ್ಕು ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಅರ್ಹತೆ/ಕೆಲಸಕ್ಕೆ ಸಮಾನ ವೇತನವನ್ನು ಕಲ್ಪಿಸಿಕೊಡುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

ಉ) **ಶ್ರೀ ಕೆ.ಹರೀಶ್ ಕುಮಾರ್** ಅವರು ಉಡುಪಿ ಜಿಲ್ಲಾ ಮೂರ್ತೆದಾರರ ಸಹಕಾರಿ ಮಹಾಮಂಡಲದ ಮಾಜಿ ಕಾರ್ಯನಿರ್ವಹಣಾಧಿಕಾರಿಯವರು ಹಣ ದುರುಪಯೋಗ ಮಾಡಿರುವ ಬಗ್ಗೆ ಹಾಗೂ ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, ಮೈಸೂರು ಪ್ರಾಂತ್ಯ ಇವರ ನ್ಯಾಯಾಲಯದಲ್ಲಿ ವಿಚಾರಣೆಗೆ ಬಾಕಿಯಿದ್ದ ಪ್ರಕರಣದ ಕಡತ ನಾಪತ್ತೆ ಮಾಡಿ ತನಿಖೆಗೆ ವಿಳಂಬ ಮಾಡುವ ಮೂಲಕ ಅವ್ಯವಹಾರದಲ್ಲಿ ಭಾಗಿಯಾಗಿದ್ದ ಅಧಿಕಾರಿಗಳಿಗೆ ರಕ್ಷಣೆ ನೀಡಿರುವುದರಿಂದ ಸಹಕಾರಿ ಮಹಾಮಂಡಲಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

ಊ) **ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ** ಅವರು ರಾಜ್ಯಾದ್ಯಂತ ಜನ ಸಾಮಾನ್ಯರು ದಿನನಿತ್ಯ ಬಳಸುವ ಆಹಾರ ಪದಾರ್ಥಗಳಲ್ಲಿ ರಾಸಾಯನಿಕ ಪದಾರ್ಥಗಳ ಕಲಬೆರಕೆಯಿಂದಾಗಿ ತೊಂದರೆ ಎದುರಿಸುತ್ತಿರುವುದರಿಂದ ಜನಸಾಮಾನ್ಯರ ಆರೋಗ್ಯದ ರಕ್ಷಣೆಗಾಗಿ ಆಹಾರ ಕಲಬೆರಕೆ ಮಾಡುವುದನ್ನು ನಿಯಂತ್ರಿಸಲು, ಕಲಬೆರಕೆ ಮಾಡುವವರ ವಿರುದ್ಧ ಕಠಿಣ ಕ್ರಮವಹಿಸುವ ಬಗ್ಗೆ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

ಅ) **ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಸ್ನಾತಕೋತ್ತರ ಪದವಿಗೆ ಎಂ.ಸಿ.ಐನವರು ಅನುಮತಿ ನೀಡಿದ್ದು, ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಬೋಧಕ ಸಿಬ್ಬಂದಿಗಳ ಕೊರತೆ ಇರುತ್ತದೆ. ಸರ್ಕಾರ ಪ್ರಸ್ತುತ ಬೋಧಕ ಹುದ್ದೆಗಳನ್ನು ಸೃಜಿಸಲು ಸಾಧ್ಯವಿಲ್ಲವೆಂದು ಕೋರ್ಸುಗಳನ್ನು ಪ್ರಾರಂಭಿಸುವುದನ್ನು ಕೈಬಿಡಲು ತಿಳಿಸಿರುವುದರಿಂದ ಉಂಟಾಗಿರುವ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

ಆ) **ಶ್ರೀಯುತರುಗಳಾದ ಬಿ.ಕೆ ಹರಿಪ್ರಸಾದ್ ಹಾಗೂ ಯು.ಬಿ ವೆಂಕಟೇಶ್** ಅವರುಗಳು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯು "ನೆರೆ ಹೊರೆಯಲ್ಲಿ ಸಮಾನ ಶಿಕ್ಷಣ ನೀತಿ" ಎಂಬ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿರುವ ಬಗ್ಗೆ ಪ್ರಸ್ತಾಪಿಸುವುದು.

ಇ) **ಶ್ರೀ ಎಸ್.ಆರ್.ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಎಂ.ನಾರಾಯಣಸ್ವಾಮಿ, ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಸದಸ್ಯರುಗಳಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಶ್ರೀ ಬಿ.ಕೆ.ಹರಿಪ್ರಸಾದ್, ಶ್ರೀ ಯು.ಬಿ.ವೆಂಕಟೇಶ್, ಶ್ರೀ ಆರ್.ಬಿ.ತಿಮ್ಮಾಪುರ, ಶ್ರೀ ಪ್ರಕಾಶ್ ಕೆ. ರಾಥೋಡ್ ಮತ್ತು ಶ್ರೀ ಎಂ.ಎ.ಗೋಪಾಲಸ್ವಾಮಿ** ಅವರುಗಳು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ, ಬೆಂಗಳೂರು ಪೂರ್ವ ತಾಲ್ಲೂಕಿನ ಬಿದರಹಳ್ಳಿ ಹೋಬಳಿಯಲ್ಲಿ ನಿರ್ಮಾಣವಾಗುತ್ತಿರುವ ವಸತಿ ಸಮುಚ್ಚಯ ಕಾಮಗಾರಿಗಳಲ್ಲಿ ಭಾರೀ ಅವ್ಯವಹಾರ ನಡೆದಿರುವ ಬಗ್ಗೆ ಪ್ರಸ್ತಾಪಿಸುವುದು.

..5..

ಈ) **ಶ್ರೀ ಎಸ್.ಆರ್.ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಎಂ.ನಾರಾಯಣಸ್ವಾಮಿ, ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಸದಸ್ಯರುಗಳಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಶ್ರೀ ಬಿ.ಕೆ.ಹರಿಪ್ರಸಾದ್, ಶ್ರೀ ಆರ್.ಬಿ.ತಿಮ್ಮಾಪುರ, ಶ್ರೀ ಪ್ರಕಾಶ್ ಕೆ. ರಾಥೋಡ್, ಶ್ರೀ ಧರ್ಮಸೇನ ಮತ್ತು ಶ್ರೀ ನಸೀರ್ ಅಹಮದ್** ಅವರುಗಳು ಬೆಂಗಳೂರಿನ ಪುಲಿಕೇಶಿನಗರ ವಿಧಾನ ಸಭೆ ಕ್ಷೇತ್ರದ ಡಿ.ಜೆ.ಹಳ್ಳಿ ಮತ್ತು ಕೆ.ಜೆ.ಹಳ್ಳಿ ಹಾಗೂ ಕಾವಲ್ ಭೈರಸಂದ್ರದಲ್ಲಿ ದಿನಾಂಕ:11.08.2020ರಂದು ನಡೆದ ಗೋಲಿಬಾರ್‌ನಲ್ಲಿ 4 ಜನ ಮೃತಪಟ್ಟಿದ್ದು, ಈ ಸಂಬಂಧ ಪೊಲೀಸರು ಅಮಾಯಕರನ್ನು ಬಂಧಿಸಿದ್ದರಿಂದ ಗಲಭೆ ಉಂಟಾಗಿ ಸ್ಥಳೀಯ ಜನರ ಆಸ್ತಿ ಪಾಸ್ತಿಗಳು ಹಾಳಾಗಿರುವುದರ ಬಗ್ಗೆ ಪ್ರಸ್ತಾಪಿಸುವುದು.

## ೦6. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:**<br>ಎಸ್.ಆರ್.ಪಾಟೀಲ್ ವಿರೋಧ ಪಕ್ಷದ ನಾಯಕರು<br>ಬಸವರಾಜ ಶಿವಲಿಂಗಪ್ಪ ಹೊರಟ್ಟಿ<br>ಬಸವರಾಜ್ ಪಾಟೀಲ್ ಇಟಗಿ<br>ಪ್ರಕಾಶ್ ಕೆ.ರಾಥೋಡ್<br>ಬಿ.ಜಿ.ಪಾಟೀಲ್ | ಉತ್ತರ ಕರ್ನಾಟಕದ ಮಹತ್ವದ ನೀರಾವರಿ ಯೋಜನೆಯಾದ ಕೃಷ್ಣ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿಗೆ ಚಾಲನೆ ನೀಡಿ ಉತ್ತರ ಕರ್ನಾಟಕ ಭಾಗದ ಸುಮಾರು 7 ಜಿಲ್ಲೆಗಳ 14.67 ಲಕ್ಷ ಎಕರೆ ಪ್ರದೇಶಗಳಿಗೆ 130 ಟಿ.ಎಂ.ಸಿ ನೀರನ್ನೊದಗಿಸುವ ಮಹತ್ವಾಕಾಂಕ್ಷಿ ಯೋಜನೆಯನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸುವ ಹಾಗೂ ಮಹಾದಾಯಿ ಯೋಜನೆಗೆ ಹೊರಡಿಸಿರುವ ಗೆಜೆಟ್ ನೋಟಿಫಿಕೇಷನ್ ರೀತ್ಯಾ ಈ ಯೋಜನೆಗೂ ಗೆಜೆಟ್ ನೋಟಿಫಿಕೇಷನ್ ಹೊರಡಿಸುವ ಬಗ್ಗೆ. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**